NOVEMBER 5, 2026
ALL INDIA RADIO- DHARWAD
PRADESH SAMACHARA (KANNADA) 7:05 AM

ಮುಖ್ಯಾಂಶಗಳು

- **ಕಬ್ಬು ಬೆಳೆಗಾರರು,** ಸಕ್ಕರೆ ಕಾರ್ಖಾನೆ ಮಾಲೀಕರ ನಡುವಿನ ದರ ನಿಗದಿ ವಿವಾದಕ್ಕೆ ತಾತ್ಕಾಲಿಕ ಪರಿಹಾರ: ಇಂದಿನಿಂದ ಕಬ್ಬು ನುರಿಸುವಿಕೆ ಹಂಗಾಮು ಆರಂಭ.

- **ಸಾರಿಗೆ ನಿಗಮದ ನ ್ಟ** ಭರಿಸಲು ಬೆಲೆ ಏರಿಕೆ ಅನಿವಾರ್ಯ–ಸರ್ಕಾರದ ನಿರ್ಧಾರ ಸಮರ್ಥಿಸಿಕೊಂಡ ಸಾರಿಗೆ ಸಚಿವರು.

- **ಬಸ್ ದರ ಹಾಗೂ ಬೆಲೆ ಏರಿಕೆ** ಖಂಡಿಸಿ ರಾಜ್ಯಾದ್ಯಂತ ಬಿಜೆಪಿಯಿಂದ ತೀವ್ರ ಹೋರಾಟ–ಬಿಜೆಪಿ ರಾಜ್ಯಾಧ್ಯಕ್ಷರ ಎಚ್ಚರಿಕೆ.

- **ಕೇಂದ್ರ ಸರ್ಕಾರ ಕೊಡಮಾಡುವ** 2024–25 ನೇ ಸಾಲಿನ 'ಸಸ್ಯತಳಿ ಸಂರಕ್ಷಕ ಸಮುದಾಯ ಪ್ರಶಸ್ತಿ'ಗೆ ಮೈಸೂರಿನ ದೇಸಿ ಸೀಡ್ ಪ್ರೊಡ್ಯೂಸರ್ಸ್ ಕಂಪನಿ ಭಾಜನ.

ಈಗ ವಾರ್ತೆಗಳ ವಿವರ

****

ಕಬ್ಬು ಬೆಳೆಗಾರರು ಹಾಗೂ ಸಕ್ಕರೆ ಕಾರ್ಖಾನೆ ಮಾಲೀಕರ ನಡುವಿನ ದರ ನಿಗದಿ ವಿವಾದಕ್ಕೆ ತಾತ್ಕಾಲಿಕ ಪರಿಹಾರ ದೊರೆತಿದ್ದು, ಪ್ರತಿ ಟನ್ ಕಬ್ಬಿಗೆ 3,600 ರೂ. ನೀಡಲು ಒಪ್ಪಿಗೆ ಸೂಚಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ತಿಳಿಸಿದ್ದಾರೆ. ನಿನ್ನೆ ರಾತ್ರಿ ಬೆಳಗಾವಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ರೈತ ಮುಖಂಡರ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಳೆ ಆಶ್ರಿತ ಕಬ್ಬು ಬೆಳೆದ ರೈತರು ಈ ದರಕ್ಕೆ ಒಪ್ಪಿಗೆ ಸೂಚಿಸಿದ್ದಾರೆ. ಇತರ ರೈತ ಸಂಘಟನೆಗಳೊಂದಿಗೆ ಸಭೆ ನಡೆಸಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಗುರುವಾರದಿಂದ ಅಂದರೆ ಇಂದಿನಿಂದ ಸಕ್ಕರೆ ಕಾರ್ಖಾನೆಗಳನ್ನು ಆರಂಭಿಸಲು ತೀರ್ಮಾನಿಸಲಾಗಿದೆ ಎಂದರು. ರಾಜ್ಯ ಸರ್ಕಾರದ ಎಸ್ಎಪಿ ಬೇಡಿಕೆ ಕುರಿತು ಒಂದು ವ ರ್ಷದ ಬಳಿಕ ಪರಿಶೀಲನೆ ನಡೆಸುವ ಪ್ರಸ್ತಾಪವಿದೆ. 3,600 ದರವು ಬೆಳಗಾವಿ ಜಿಲ್ಲೆಗೆ ಮಾತ್ರ ಸೀಮಿತವಾಗಿದೆ. ಬಾಗಲಕೋಟ, ವಿಜಯಪುರ ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ವಿಭಿನ್ನ ಬೆಲೆ ನಿಗದಿಯಾಗುತ್ತದೆ. ಕೇಂದ್ರ ಸರ್ಕಾರದ ಕನಿ ್ಠ ಬೆಂಬಲ ಬೆಲೆ ಘೋ ಷಣೆಯಾದರೆ ಅದರ ಅನುಸಾರ ಕಾರ್ಖಾನೆಗಳು ಬೆಲೆ ನೀಡಬೇಕಾಗುತ್ತದೆ. ಸದ್ಯ ಕಾರ್ಖಾನೆಗಳು ಆರಂಭವಾಗಬೇಕಾಗಿದ್ದರಿಂದ, ಕಬ್ಬು ಬೆಳೆದ ರೈತರು ತೊಂದರೆಗೆ ಒಳಗಾಗಬಾರದು ಎನ್ನುವ ಉದ್ದೇಶದಿಂದ ಸರ್ಕಾರದ ಮಧ್ಯಸ್ಥಿಕೆಯಲ್ಲಿ ರೈತರು ಮತ್ತು ಕಾರ್ಖಾನೆ ಮಾಲೀಕರ ಮಧ್ಯ ಹೊಂದಾಣಿಕೆ ಮಾತುಕತೆ ನಡೆಸಿ, ಪರಿಹಾರ ಕಂಡುಕೊಳ್ಳಲಾಗಿದೆ ಎಂದು ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದರು.

****

ಕೇಂದ್ರ ಸರ್ಕಾರ ಡೀಸೆಲ್ ಬೆಲೆ ಏರಿಕೆ ಮಾಡಿರುವುದರಿಂದ ಸಾರಿಗೆ ನಿಗಮದ ನ ್ಟ ಭರಿಸಲು ಬೆಲೆ ಏರಿಕೆ ಅನಿವಾರ್ಯ ಎಂದು ಸಾರಿಗೆ ಸಚಿವ ಬೈರತಿ ಸುರೇಶ್, ಸರ್ಕಾರದ ನಿರ್ಧಾರವನ್ನು ಸಮರ್ಥಿಸಿಕೊಂಡಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಎಸ್ಆರ್‌ಟಿಸಿ ಬಸ್ ದರ

ಗರಿ ್ಠ 9 ರೂಪಾಯಿ, ಬಿಎಂಟಿಸಿ ಬಸ್ ದರ ಪ್ರತಿ ಸ್ಟೇಜ್‌ಗೆ 6 ರೂಪಾಯಿಂದ 10 ರೂಪಾಯಿವರೆಗೆ ಹೆಚ್ಚಳವಾಗಿದೆ ಎಂದರು. ಸಾಮಾನ್ಯ ಸಾರಿಗೆ ಸೇವೆಗಳಲ್ಲಿ ಗರಿ ್ಠ 9 ರೂಪಾಯಿಗಳ ್ಟ ಪ್ರಯಾಣ ದರ ಹೆಚ್ಚಳಕ್ಕೆ ಅವಕಾಶವಿದ್ದು, ಹಂತ ಹಂತವಾಗಿ ದರ ಏರಿಕೆ ಜಾರಿಗೆ ಬರಲಿದೆ. ಕೆಎಸ್‌ಆರ್‌ಟಿಸಿ ಎಕ್ಸ್‌ಪ್ರೆಸ್ ಬಸ್‌ಗಳ ದರ 81 ರೂಪಾಯಿಯಿಂದ 100 ರೂಪಾಯಿಗೆ ಅಂದರೆ ಶೇಕಡ 19 ರ ್ಟ ದರ ಹೆಚ್ಚಳವಾಗಲಿದ್ದು, ಬಿಎಂಟಿಸಿ ಬಸ್ ಪ್ರಯಾಣ ದರದಲ್ಲಿ 4 ರೂಪಾಯಿಗಳ ್ಟ ಹೆಚ್ಚಳವಾಗಲಿದೆ. ಡೀಸೆಲ್ ದರ ಹಾಗೂ ನಿರ್ವಹಣಾ ವೆಚ್ಚ ಹೆಚ್ಚಾದಾಗ ಮಾತ್ರ ಟಿಕೆಟ್ ದರ ಏರಿಸಲು ನಿಗಮಗಳಿಗೆ ಅವಕಾಶ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

****

ಬಸ್ ದರ ಹಾಗೂ ಬೆಲೆ ಏರಿಕೆ ಖಂಡಿಸಿ ಬಿಜೆಪಿ ರಾಜ್ಯಾದ್ಯಂತ ತೀವ್ರ ಹೋರಾಟ ಮುಂದುವರಿಸಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಎಚ್ಚರಿಸಿದ್ದಾರೆ. ಚಿತ್ರದುರ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ನಿರಂತರ ಬೆಲೆ ಏರಿಕೆಯ ಸುಳಿಯಲ್ಲಿ ಜನಸಾಮಾನ್ಯರು ಸಿಲುಕಿದ್ದು, ಅವರ ಬದುಕು ಅಯೋಮಯವಾಗಿದೆ. ಹಾಲಿನ ದರವನ್ನು ಲೀಟರ್‌ಗೆ 8 ರಿಂದ 12 ರವರೆಗೆ ಏರಿಸಲಾಗಿದೆ. ಮೊಸರು ಹಾಗೂ ಬಸ್ ಪ್ರಯಾಣ ದರವನ್ನು ಶೇಕಡಾ 30 ರಿಂದ 40 ರ ್ಟ ಹೆಚ್ಚಿಸಲಾಗಿದೆ. ಬೆಲೆ ಏರಿಕೆ ಮಾಡುವುದನ್ನೇ ಸಾಧನೆ ಮಾಡಿಕೊಂಡಿರುವ ಸರ್ಕಾರಕ್ಕೆ ಜನಪರ ಕೆಲಸಗಳನ್ನು ಮಾಡಲು ಸಾಧ್ಯವಾಗುತ್ತಿಲ್ಲ ಎಂದರು. ಹೇಳಿದರು. ಅವೈಜ್ಞಾನಿಕ ನೀತಿಗಳಿಂದಾಗಿ ಸರ್ಕಾರದ ಖಜಾನೆ ಸಂಪೂರ್ಣ ಖಾಲಿಯಾಗಿದೆ. ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ. ಖಜಾನೆ ತುಂಬಿಸಿಕೊಳ್ಳಲು ಸರ್ಕಾರ ಜನಸಾಮಾನ್ಯರ ಮೇಲೆ ತೆರಿಗೆ ಹೊರೆ ಹಾಕುತ್ತಿದೆ ಎಂದು ಬಿ.ವೈ.ವಿಜಯೇಂದ್ರ ಅಸಮಾಧಾನ ವ್ಯಕ್ತಪಡಿಸಿದರು.

****

ಈ ಮಧ್ಯೆ ಬಸ್ ದರ ಏರಿಕೆ ವಿರುದ್ಧ ಕೋಲಾರದಲ್ಲಿ ಪ್ರತಿಭಟನೆ ನಡೆಸಿರುವ ರೈತ ಸಂಘ, ಬರಗಾಲ ಹಾಗೂ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ತತ್ತರಿಸಿರುವ ಜನಸಾಮಾನ್ಯರಿಗೆ ಬಸ್ ಟಿಕೆಟ್ ದರ ಏರಿಕೆ ಮತ್ತ ್ಟ ಹೊರೆಯಾಗಲಿದೆ. ಸರ್ಕಾರ ತನ್ನ ನಿರ್ಧಾರವನ್ನು ಮರುಪರಿಶೀಲಿಸಬೇಕು ಎಂದು ಆಗ್ರಹಿಸಿದೆ.

****

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿಜಯಪುರ, ದೇವನಹಳ್ಳಿಗೆ ಕಾವೇರಿ ನೀರು ತರುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳ ಜೊತೆಗೆ ಚರ್ಚಿಸಲಾಗಿದೆ, ಶೀಘ್ರ ಮುಖ್ಯಮಂತ್ರಿಗಳನ್ನು ಕರೆಸಿ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್ ಮುನಿಯಪ್ಪ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಪುರಸಭೆ ಕಾರ್ಯಾಲಯ ಆವರಣದಲ್ಲಿ ಆಯೋಜಿಸಿದ್ದ ಪೌರಕಾರ್ಮಿಕರ ದಿನಾಚರಣೆ ಹಾಗೂ ಆಯುಧ ಪೂಜೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ದೇವನಹಳ್ಳಿಯಿಂದ ಬಾಗೆಪಲ್ಲಿವರೆಗೂ ದಶಪಥದ ಕಾಮಗಾರಿ ಶೀಘ್ರ ಆರಂಭವಾಗಲಿದ್ದು, ದೇವನಹಳ್ಳಿ ಯಿಂದ ವೇಮಗಲ್‌ವರೆಗೆ 6 ಪಥದ ರಸ್ತೆ ಕಾಮಗಾರಿ ಆರಂಭವಾಗಿದೆ. ದೇವನಹಳ್ಳಿ ಪುರಸಭೆಯ ಪೌರಕಾರ್ಮಿಕರಿಗೆ ನಿವೇಶನ ಹಂಚಿಕೆಗೆ ಒಂದು ತಿಂಗಳಲ್ಲಿ ಕ್ರಮ ಕೈಗೊಳ್ಳಲಾಗುವುದು ಒಂದು ತಿಂಗಳಲ್ಲಿ ಹಕ್ಕು ಪತ್ರ ವಿತರಿಸಲಾಗುವುದು ಎಂದು ಸಚಿವರು ಹೇಳಿದರು.

****

ಬೆಂಗಳೂರು ದಕ್ಷಿಣ ಜಿಲ್ಲೆಯ ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿ ಒತ್ತುವರಿಯಾಗಿರುವ ಭೂಮಿಯನ್ನು ತೆರವುಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸಚಿವ ಈಶ್ವರ ಖಂಡ್ರೆ ಸೂಚಿಸಿದ್ದಾರೆ. ಇಲಾಖೆಯ ಮೈಸೂರು ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಗೆ ತೆರಳುವ ಮಾರ್ಗದಲ್ಲಿ ಜಿಲ್ಲಾಧಿಕಾರಿ ಅವರೊಂದಿಗೆ ಚರ್ಚಿಸಿದ ಸಚಿವರು, ಜಿಲ್ಲೆ ವ್ಯಾಪ್ತಿಯಲ್ಲಿ 1292 ಕೆರೆಗಳಿದ್ದು, 801 ಕೆರೆಗಳ 1014 ಎಕರೆ ಭೂಮಿ ಒತ್ತುವರಿಯಾಗಿತ್ತು. ಈ ಪೈಕಿ 72 ಕೆರೆಗಳ 205 ಎಕರೆ ಒತ್ತುವರಿ ಮಾತ್ರ ತೆರವು ಮಾಡಲಾಗಿದ್ದು, ಇನ್ನೂ 729 ಕೆರೆಗಳ 809 ಎಕರೆ ಭೂಮಿ ಒತ್ತುವರಿ ತೆರವು ಮಾಡಬೇಕಾಗಿದೆ. ಈ ನಿಟ್ಟಿನಲ್ಲಿ ಕ್ರಮ ವಹಿಸಿ ಕೆರೆಗಳ ಸಂರಕ್ಷಣೆ ಮಾಡಿ, ನೀರು ತುಂಬಿಸಿ, ಅಂತರ್ಜಲ ಹೆಚ್ಚಿಸುವಂತೆ ಸಚಿವರು ಸೂಚನೆ ನೀಡಿದರು. ನೀಡಿದರು.

****

ಬೆಳಗಾವಿಯಲ್ಲಿ ನಡೆಯಲಿರುವ ಪ್ರಸಕ್ತ ಸಾಲಿನ ಚಳಿಗಾಲದ ಅಧಿವೇಶನದ ಯಶಸ್ಸಿಗೆ ರಚಿಸಲಾದ ವಿವಿಧ ಸಮಿತಿಗಳು, ಉಪ ಸಮಿತಿಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಬೆಳಗಾವಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಸೂಚಿಸಿದ್ದಾರೆ. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜರುಗಿದ ವಿವಿಧ ಸಮಿತಿಗಳ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಸುವರ್ಣ ವಿಧಾನ ಸೌಧದಲ್ಲಿ ಅಡತಡೆಗಳಿಲ್ಲದೆ ನಿರಂತ ಅಂತರ್ಜಾಲ ವ್ಯವಸ್ಥೆ ಕಲ್ಪಿಸಲು ಸಂಬಂಧಿಸಿದ ಸಂಸ್ಥೆಯವರ ಜೊತೆಗೆ ಈಗಿನಿಂದಲೇ ಚರ್ಚಿಸಿ, ಅನುಷ್ಠಾನಗೊಳಿಸಬೇಕು. ಅಧಿವೇಶನ ಸಂದರ್ಭದಲ್ಲಿ ಯಾವುದೇ ಲೋಪಗಳಿಗೆ ಆಸ್ಪದ ನೀಡಬಾರದು ಎಂದು ಸೂಚನೆ ನೀಡಿದರು.

****

ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..
ಪ್ರಕಟಣೆ–32 ಸೆಕೆಂಡ್ಸ್
ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ
****

ಸಹಜ ಸಮೃದ್ಧ ಸಂಸ್ಥೆ ಪ್ರೋತ್ಸಾಹದೊಂದಿಗೆ ಮೈಸೂರಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ದೇಸಿ ಸೀಡ್ ಪ್ರೊಡ್ಯೂಸರ್ಸ್ ಕಂಪನಿ ಕೇಂದ್ರ ಸರ್ಕಾರದ 2024–25 ನೇ ಸಾಲಿನ 'ಸಸ್ಯತಳಿ ಸಂರಕ್ಷಕ ಸಮುದಾಯ ಪ್ರಶಸ್ತಿ'ಗೆ ಆಯ್ಕೆಯಾಗಿದೆ. ಮೈಸೂರು, ಮಂಡ್ಯ, ಚಾಮರಾಜನಗರ ಮತ್ತು ಧಾರವಾಡ ಜಿಲ್ಲೆಗಳ ಸಮಾನ ಮನಸ್ಕ ಬೀಜ ಸಂರಕ್ಷಕ ರೈತರ ಸಾಮೂಹಿಕ ಪ್ರಯತ್ನದ ಫಲವಾಗಿ ಸ್ಥಾಪನೆಯಾದ ಸಹಜ ಸೀಡ್ಸ್ ದೇಶದ ಮೊದಲ ರೈತರ ಮಾಲೀಕತ್ವದ ಸಾವಯವ ಬೀಜ ಕಂಪನಿ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. 250 ಕ್ಕೂ ಹೆಚ್ಚು ಸಾಂಪ್ರದಾಯಿಕ ಬೆಳೆ ತಳಿಗಳ ಸಂರಕ್ಷಣೆಗೆ ಕಂಪೆನಿ ಉತ್ತೇಜನ ನೀಡಿದೆ. ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯದಡಿ ಕಾರ್ಯ ನಿರ್ವಹಿಸುವ ಸಸ್ಯ ತಳಿಗಳ ಸಂರಕ್ಷಣೆ ಮತ್ತು ರೈತರ ಹಕ್ಕುಗಳ ಪ್ರಾಧಿಕಾರ–ಪಿ.ಪಿ.ವಿ.ಎಫ್.ಆರ್.ಐ ನೀಡುವ ಈ ಪ್ರಶಸ್ತಿ 10 ಲಕ್ಷ ರೂಪಾಯಿ ನಗದು, ಪ್ರಶಸ್ತಿ ಪತ್ರ ಹಾಗೂ ಸ್ಮರಣಿಕೆ ಒಳಗೊಂಡಿದೆ. ಇದೇ 12 ರಂದು ನವದೆಹಲಿಯಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ.

****

ಮಕ್ಕಳ ಮಾರಾಟ ಗಂಭೀರ ಸ್ವರೂಪದ ಅಪರಾಧವಾಗಿದ್ದು, ಅನಧಿಕೃತವಾಗಿ ಮಗುವನ್ನು ನೀಡುವುದು ಮತ್ತು ಪಡೆಯುವುದು ಸಂಪೂರ್ಣವಾಗಿ ಕಾನೂನು ಬಾಹಿರ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಎಚ್ಚರಿಸಿದೆ. ಈ ಕುರಿತು ಪ್ರಕಟಣೆ ಬಿಡುಗಡೆ ಮಾಡಿರುವ ಇಲಾಖೆ, ಬಾಲನ್ಯಾಯ ಕಾಯ್ದೆ–2015 ರ ಸೆಕ್ಷನ್ 81 ರ ಅನ್ವಯ ಮಕ್ಕಳನ್ನು ಮಾರುವವರಿಗೆ ಹಾಗೂ ಕೊಳ್ಳುವವರಿಗೆ 5 ವ ರ್ಷಗಳವರೆಗೆ ಸೆರೆಮನೆವಾಸದೊಂದಿಗೆ 1 ಲಕ್ಷ ರೂಪಾಯಿವರೆಗೆ ದಂಡ ವಿಧಿಸಲು ಅವಕಾಶವಿದೆ. ಈ ಅಪರಾಧದಲ್ಲಿ ಆಶ್ರಯ ನೀಡಿದವರು ಶಾಮೀಲಾಗಿದ್ದರೆ, ಶಿಕ್ಷೆಯ ಅವಧಿಯು 3 ವ ರ್ಷಗಳಿಗೆ ಕಡಿಮೆ ಇಲ್ಲದಂತೆ 7 ವ ರ್ಷಗಳವರೆಗೆ ವಿಸ್ತರಣೆಗೊಳ್ಳಲಿದೆ. ಮಗುವನ್ನು ದತ್ತು ಪಡೆಯಲು ಅಪೇಕ್ಷಿಸುವ ಪೋ ಷಕರು ನಿಗದಿತ ನಿಯಮಗಳಡಿ ಮಕ್ಕಳ ರಕ್ಷಣಾಧಿಕಾರಿಯವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

****

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಕಬ್ಬು ಬೆಳೆಗಾರರು, ಸಕ್ಕರೆ ಕಾರ್ಖಾನೆ ಮಾಲೀಕರ ನಡುವಿನ ದರ ನಿಗದಿ ವಿವಾದಕ್ಕೆ ತಾತ್ಕಾಲಿಕ ಪರಿಹಾರ: ಇಂದಿನಿಂದ ಕಬ್ಬು ನುರಿಸುವಿಕೆ ಹಂಗಾಮು ಆರಂಭ.

ಸಾರಿಗೆ ನಿಗಮದ ನ ್ಟ ಭರಿಸಲು ಬೆಲೆ ಏರಿಕೆ ಅನಿವಾರ್ಯ–ಸರ್ಕಾರದ ನಿರ್ಧಾರ ಸಮರ್ಥಿಸಿಕೊಂಡ ಸಾರಿಗೆ ಸಚಿವರು.

ಬಸ್ ದರ ಹಾಗೂ ಬೆಲೆ ಏರಿಕೆ ಖಂಡಿಸಿ ರಾಜ್ಯಾದ್ಯಂತ ಬಿಜೆಪಿಯಿಂದ ತೀವ್ರ ಹೋರಾಟ–ಬಿಜೆಪಿ ರಾಜ್ಯಾಧ್ಯಕ್ಷರ ಎಚ್ಚರಿಕೆ.

ಕೇಂದ್ರ ಸರ್ಕಾರ ಕೊಡಮಾಡುವ 2024–25 ನೇ ಸಾಲಿನ 'ಸಸ್ಯತಳಿ ಸಂರಕ್ಷಕ ಸಮುದಾಯ ಪ್ರಶಸ್ತಿ'ಗೆ ಮೈಸೂರಿನ ದೇಸಿ ಸೀಡ್ ಪ್ರೊಡ್ಯೂಸರ್ಸ್ ಕಂಪನಿ ಭಾಜನ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

******END******